ಮೈಶುಗರ್ ಕಂಪನಿ ನಷ್ಟ ಉಂಟಾಗಿರುವ ಬಗ್ಗೆ

307 (190) ಶ್ರೀ ಶ್ರೀನಿವಾಸ್ ಎಂ, (ಮಂಡ್ಯ) :– ಮಾನ್ಯ ತೋಟಗಾರಿಕೆ ಮತ್ತು ಸಕ್ಕರೆ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಮಂಡ್ಯ ಮೈಷುಗರ್ ಸಕ್ಕರೆ ಕಂಪನಿಯ ಅಧ್ಯಕ್ಷರು ತಮ್ಮ ಅಧಿಕಾರ ದುರುಪಯೋಗಪಡಿಸಿಕೊಂಡು ಸಕ್ಕರೆ ಕಂಪನಿಗೆ ಕೋಟ್ಯಾಂತರ ರೂ. ನಷ್ಟವುಂಟುಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದಲ್ಲಿ ನಷ್ಟವುಂಟು ಮಾಡಿರುವ ಅಧ್ಯಕ್ಷರು ಹಾಗೂ ಇತರೆ ಆಡಳಿತ ಮಂಡಳಿಯ ಸದಸ್ಯರುಗಳ ಮೇಲೆ ಸರ್ಕಾರ ಕೈಗೊಂಡ ಕ್ರಮವೇನು ?

ಇ) ಮಂಡ್ಯ ಮೈಷುಗರ್ ಸಕ್ಕರೆ ಕಂಪನಿಯ ಆಡಳಿತವು ಕಂಪನಿಯನ್ನು ಸಮರ್ಪಕವಾಗಿ ನಿರ್ವಹಿಸಲು ವಿಫಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಹಾಗಿದಲ್ಲಿ ಈಗಿರುವ ಆಡಳಿತ ಮಂಡಳಿಯನ್ನು ರದ್ದುಪಡಿಸಿ ಆಡಳಿತಾಧಿಕಾರಿಯನ್ನು ನೇಮಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

ಉ) ಹಾಗಿದ್ದಲ್ಲಿ, ಆಡಳಿತ ಮಂಡಳಿಯನ್ನು ಯಾವಾಗ ರದ್ದುಪಡಿಸಲಾಗುವುದು ಮತ್ತು ಆಡಳಿತಾಧಿಕಾರಿಯನ್ನು ಯಾವಾಗ ನೇಮಕ ಮಾಡಲಾಗುವುದು, ವಿವರ ನೀಡುವುದು;

ಶ್ರೀ ಎಸ್. ಎ. ರವೀಂದ್ರನಾಥ್ (ತೋಟಗಾರಿಕೆ ಮತ್ತು ಸಕ್ಕರೆ ಸಚಿವರು):–

ಅ) ಮಂಡ್ಯ ಮೈಷುಗರ್ ಕಂಪನಿಯ ಹಾಲಿ ಅಧ್ಯಕ್ಷರ ವಿರುದ್ಧ ಸರ್ಕಾರಕ್ಕೆ ದೂರುಗಳು ಬಂದಿದ್ದು, ಈ ಬಗ್ಗೆ ಕಾರ್ಖಾನೆಯ ಮುಖ್ಯ ಆಡಳಿತಾಧಿಕಾರಿಯವರು ಸರ್ಕಾರಕ್ಕೆ ಸಲ್ಲಿಸಿರುವ ವರದಿಯನ್ನು ಸದರಿ ಆರೋಪಗಳಲ್ಲಿ ಹುರುಳಿಲ್ಲ ಎಂದು ತಿಳಿಸಿರುತ್ತಾರೆ.

ಆ) ಉದ್ಭವಿಸುವುದಿಲ್ಲ

ಇ) ಇಲ್ಲ

ಈ) ಉದ್ಭವಿಸುವುದಿಲ್ಲ

ಉ) ಉದ್ಭವಿಸುವುದಿಲ್ಲ

ಸಕ್ಕರೆ ಕಾರ್ಖಾನೆಗೆ ಕಬ್ಬು ಸರಬರಾಜು

309 (537) ಶ್ರೀ ಶ್ರೀನಿವಾಸ್ ಎಂ. (ಮಂಡ್ಯ) :– ಮಾನ್ಯ ತೋಟಗಾರಿಕೆ ಮತ್ತು ಸಕ್ಕರೆ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಮಂಡ್ಯ ಮೈಶುಗರ್ ಸಕ್ಕರೆ ಕಾರ್ಖಾನೆಗೆ ಕಬ್ಬು ಸರಬರಾಜು ಮಾಡಿರುವ ರೈತರಿಗೆ ಹಣ ಸಂದಾಯ ಮಾಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;